ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಅಂಧ ವಿದ್ಯಾರ್ಥಿಗಳಿಗೆ ಸ್ವಾವಲಂಬಿಯಾಗಲು ಕಿಟ್ ವಿತರಣೆ

ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

604 (768) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ 500 ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಮೊಬೈಲ್ ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾಧನಗಳನ್ನು ಒಳಗೊಂಡ ತಲಾ 25.000 ರೂಪಾಯಿಗಳ ಕಿಟ್‌ಗಳನ್ನು ವಿತರಿಸಲಾಗುವುದೆಂದು ಘೋಷಣೆ ಮಾಡಿದ್ದು, ಇದು ಅನುಷ್ಠಾನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಜನ ಫಲಾನುಭವಿಗಳಿಗೆ ವಿತರಿಸಲಾಗಿದೆ;

(ಇ) ವಿತರಿಸದಿದ್ದಲ್ಲಿ, ಯಾವಾಗ ವಿತರಿಸಲಾಗುವುದು?